ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 21–8–2017

# ಪತ್ರಿಕಾ ಪ್ರಕಟಣೆ

## "ವರ್ಷಧಾರೆ", ಮೋಡ ಬಿತ್ತನೆ ಕಾರ್ಯ ಆರಂಭ

ಬೆಂಗಳೂರು ಆಗಸ್ಟ್ 21(ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಭೀಕರ ಬರಗಾಲವಿದ್ದು ಕೃಷಿ ಹಾಗೂ ಕುಡಿಯುವ ನೀರಿಗಾಗಿ ಮೋಡ ಬಿತ್ತನೆ ಅನಿವಾರ್ಯವಾಗಿದ್ದು ಈ ಸಾಲಿನ ಮೋಡ ಬಿತ್ತನೆಯನ್ನು "ವರ್ಷಧಾರೆ" ಎಂದು ಹೆಸರಿಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಹೆಚ್.ಕೆ. ಪಾಟೀಲ್ ಅವರು ತಿಳಿಸಿದರು.

ಇಂದು ನಗರದ ಜಕ್ಕೂರು ವಿಮಾನ ನಿಲ್ದಾಣದಲ್ಲಿ ಹಮ್ಮಿಕೊಂಡಿದ್ದ ಮೋಡ ಬಿತ್ತನೆ ಕಾರ್ಯ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು 2003 ರಲ್ಲಿ ದೇಶದಲ್ಲೇ ಪ್ರಥಮವಾಗಿ ಕರ್ನಾಟಕ "ವರುಣಾ" ಹೆಸರಿನಲ್ಲಿ ಮೋಡ ಬಿತ್ತನೆ ಕಾರ್ಯ ಮಾಡಿತ್ತು. ಇಂದಿನ ಮೋಡಬಿತ್ತನೆ ಕಾರ್ಯ ವೈಜ್ಞಾನಿಕವಾಗಿದ್ದು ರಾಜ್ಯದಲ್ಲಿ ಉತ್ತಮ ಮಳೆಯಾಗಲಿ ಎಂದು ಶುಭ ಹಾರೈಸಿದರು.

ಕಳೆದ ವರ್ಷವೆ ಈ ಮೋಡ ಬಿತ್ತನೆ ಕಾರ್ಯವನ್ನು ಆರಂಭಿಸಲು ಯೋಜಿಸಲಾಗಿತ್ತು. ಆದರೆ ಅನಿವಾರ್ಯ ಕಾರಣಗಳಿಂದ ಕೈಗೊಳ್ಳಲಾಗಲಿಲ್ಲ. ಈ ಸಾಲಿನಲ್ಲಿ ಸಹ ಬರಗಾಲ ಮುಂದುವರೆದಿರುವ ಕಾರಣ ಮೋಡ ಬಿತ್ತನೆ ಕಾರ್ಯವನ್ನು ಹಮ್ಮಿಕೊಳ್ಳಲಾಯಿತು ಎಂದರು.

ಯೂರೋಪ್, ಚೈನಾ, ಥಾಯ್‌ಲ್ಯಾಂಡ್ ಸೇರಿದಂತೆ ಅನೇಕ ರಾಷ್ಟ್ರಗಳು ಈಗಾಗಲೇ ಮೋಡ ಬಿತ್ತನೆ ಕಾರ್ಯವನ್ನು ಕೈಗೊಂಡು ಯಶಸ್ಸು ಕಂಡಿದ್ದಾರೆ. ನಮ್ಮ ರಾಜ್ಯದಲ್ಲಿ ಸಹಾ ಯಶಸ್ಸು ಕಾಣಲಿ ಎಂದು ಹೇಳಿದರು.

ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ಮಾತನಾಡಿ, ರಾಜ್ಯದಲ್ಲಿರುವ ಸತತ ಬರಗಾಲದಿಂದ ವರ್ಷಕ್ಕೆ 10 ರಿಂದ 15 ಸಾವಿರ ಕೋಟಿ ರೂ. ನಷ್ಟವಾಗುತ್ತಿದ್ದು ಬರ ನಿರ್ವಹಣೆಗಾಗಿ ಸರ್ಕಾರ 5 ರಿಂದ 6 ಸಾವಿರ ಕೋಟಿ ರೂ. ವೆಚ್ಚ ಮಾಡುತ್ತಿದ್ದು ಅತ್ಯಂತ ಕಡಿಮೆ ಹಣದಲ್ಲಿ ವೈಜ್ಞಾನಿಕ ಮಾರ್ಗವನ್ನು ಅನುಸರಿಸಿ ಮೋಡ ಬಿತ್ತನೆ ಕಾರ್ಯ ಮಾಡಿ ಮಳೆಯಾದಲ್ಲಿ ರಾಜ್ಯದ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಂತೆ ಎಂದು ಹೇಳಿದರು.

ದೇಶದಲ್ಲೇ ಆಯವ್ಯಯದಲ್ಲಿ ಮಳೆ ಬಿತ್ತನೆ ಕಾರ್ಯವನ್ನು ಅಡಕ ಮಾಡಿದ ಏಕೈಕ ರಾಜ್ಯ ಕರ್ನಾಟಕ. ವಿಜ್ಞಾನಿಗಳ ಶಿಫಾರಸ್ಸು ಮತ್ತು ವೈಜ್ಞಾನಿಕ ಮಾರ್ಗಗಳನ್ನು ಮೋಡ ಬಿತ್ತನೆ ಕಾರ್ಯದಲ್ಲಿ ಅನುಸರಿಸಲಾಗುತ್ತಿದೆ ಎಂದರು.

ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎಂ.ಆರ್. ಸೀತಾರಾಂ ಅವರು ಮಾತನಾಡಿ ಅತ್ಯಂತ ತ್ವರಿತಗತಿಯಲ್ಲಿ ಮೋಡ ಬಿತ್ತನೆ ಕಾರ್ಯವನ್ನು ಕಾರ್ಯರೂಪಕ್ಕೆ ತಂದ ಶ್ರೇಯಸ್ಸು ಗ್ರಾಮೀಣಾಭಿವೃದ್ಧಿ ಸಚಿವರಿಗೆ ಮತ್ತು ಈ ಕಾರ್ಯಕ್ಕಾಗಿ ದುಡಿದ ಎಲ್ಲರಿಗೂ ಸಲ್ಲುತ್ತದೆ ಎಂದರು.

ಮುಂದಿನ ದಿನಗಳಲ್ಲಿ ಅವಶ್ಯವಿದ್ದಲ್ಲಿ ಈ ಪ್ರಯೋಗವನ್ನು ಮತ್ತೆ ಕೈಗೊಳ್ಳಬಹುದು. 2003 ರಲ್ಲಿ ಮೊದಲ ಪ್ರಯೋಗ ನಡೆಸಿದ ರಾಜ್ಯ ಕರ್ನಾಟಕ. ರಾಜ್ಯದ ರೈತರ ಪರವಾಗಿ ಸಚಿವ ಹೆಚ್.ಕೆ. ಪಾಟೀಲರಿಗೆ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಪ್ರಧಾನ ಕಾರ್ಯದರ್ಶಿ ಡಾ. ನಾಗಾಂಬಿಕದೇವಿ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಹಾಗೂ ಗಣ್ಯರು ಭಾಗವಹಿಸಿದ್ದರು.

**84/84**

## . ಶ್ರವಣಬೆಳಗೊಳ ಮಹಾಮಸ್ತಕಾಭಿಷೇಕ: 175 ಕೋಟಿ ರೂ. ಬಿಡುಗಡೆ ಸಚಿವ ಎ. ಮಂಜು

<u>ಬೆಂಗಳೂರು ಆಗಸ್ಟ್ 21(ಕರ್ನಾಟಕ ವಾರ್ತೆ)</u>

ದಕ್ಷಿಣ ಭಾರತದ ಜೈನರ ಕಾಶಿ ಎಂದೇ ವಿಶ್ವವಿಖ್ಯಾತಿ ಪಡೆದಿರುವ ಮಹಾಮಸ್ತಕಾಭಿಷೇಕ 2018 ರ ಫೆಬ್ರವರಿ 7 ರಿಂದ 26 ರವರೆಗೆ ನಡೆಯಲಿದೆ ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಪಶು ಸಂಗೋಪನಾ ಹಾಗೂ ರೇಷ್ಮೆ ಸಚಿವ ಎ. ಮಂಜು ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಪೂರ್ವಭಾವಿ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಮಹಾಮಸ್ತಕಾಭಿಷೇಕದ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಈಗಾಗಲೇ 175 ಕೋಟಿ ರೂ. ಬಿಡುಗಡೆ ಮಾಡಿದೆ ಎಂದರು.

ಮಹಾಮಸ್ತಕಾಭಿಷೇಕ ಕಾರ್ಯಕ್ರಮದಲ್ಲಿ ದೇಶ, ವಿದೇಶಗಳಿಂದ ಸುಮಾರು 30 ಲಕ್ಷಕ್ಕೂ ಹೆಚ್ಚು ಭಕ್ತಾದಿಗಳು ಪಾಲ್ಗೊಳ್ಳಲಿದ್ದಾರೆ ಎಂದ ಸಚಿವರು ಮಹಾಮಸ್ತಕಾಭಿಷೇಕದ ಅಂಗವಾಗಿ ನಿರ್ಮಿಸುವ ಅಟ್ಟಣೆಗೆಯನ್ನು ಲೋಕೋಪಯೋಗಿ ಇಲಾಖೆ ಉಸ್ತುವಾರಿಯಲ್ಲಿ ನಿರ್ಮಿಸಲು ಇಂದು ನಡೆದ ಸಭೆಯಲ್ಲಿ ತೀರ್ಮಾನಿಸಲಾಯಿತು.  ಈ ಕಾರ್ಯಕ್ಕೆ 12 ಕೋಟಿ ರೂಪಾಯಿ ಖರ್ಚಾಗಲಿದೆ. ಅಲ್ಲದೆ ಶ್ರವಣಬೆಳಗೊಳದ ಸುತ್ತಲೂ ಯಾತ್ರಾರ್ಥಿಗಳು ತಂಗಲು ಅನುಕೂಲವಾಗುವಂತೆ ಸುಮಾರು 75 ಕೋಟಿ ರೂ. ಅಂದಾಜು ವೆಚ್ಚದಲ್ಲಿ 12 ಉಪನಗರವನ್ನು ನಿರ್ಮಿಸಲಾಗುವುದು ಎಂದು ಸಚಿವರು ತಿಳಿಸಿದರು.

ಮಹಾಮಸ್ತಕಾಭಿಷೇಕ ಕಾರ್ಯಕ್ರಮದ ಯಶಸ್ಸಿಗೆ ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡುವಂತೆ ಈಗಾಗಲೇ ಪತ್ರ ಬರೆಯಲಾಗಿದ್ದು ಈವರೆಗೂ ಕೇಂದ್ರ ಸಕಾರದಿಂದ ಹಣ ಬಿಡುಗಡೆಯಾಗಿಲ್ಲ ಎಂದು ತಿಳಿಸಿದ ಸಚಿವರು 2006 ರಲ್ಲಿ ನಡೆದ ಮಹಾಮಸ್ತಕಾಭಿಷೇಕಕ್ಕೆ ಕೇಂದ್ರ ಸರ್ಕಾರ 90 ಕೋಟಿ ರೂ. ಹಣ ಬಿಡುಗಡೆ ಮಾಡಿತ್ತು ಎಂದು ತಿಳಿಸಿದರು.

ಮಹಾಮಸ್ತಕಾಭಿಷೇಕದ ಅಂಗವಾಗಿ ಅಲ್ಲಿರುವ ಕಲ್ಯಾಣಿಯನ್ನು ಶುದ್ಧೀಕರಣ ಮಾಡುವ ಕೆಲಸ ಈಗಾಗಲೇ ಪ್ರಾರಂಭವಾಗಿದೆ. ಸಚಿವರು ಶ್ರವಣಬೆಳಗೊಳದಲ್ಲಿನ ಹಾಗೂ ಸುತ್ತಮುತ್ತಲಿನ ರಸ್ತೆ ದುರಸ್ತಿ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಈಗಾಗಲೇ ಪ್ರಾರಂಭಿಸಲಾಗಿದ್ದು ಈ ಭಾರಿಯ ಮಹಾಮಸ್ತಕಾಭಿಷೇಕವು ಯಶಸ್ವಿಯಾಗುವಂತೆ ಈಗಾಗಲೆ ಉಪ ಸಮಿತಿಗಳನ್ನು ರಚಿಸಿ ಕೆಲಸ ಪ್ರಾರಂಭಿಸಲಾಗಿದೆ ಎಂದು ಸಚಿವ ಎ. ಮಂಜು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

**85/85**

# "ಬ್ಲೂವೇಲ್ ಚಾಲೆಂಜ್"– ಅರಿವು ಮೂಡಿಸಲು ಶಿಕ್ಷಣ ಅಧಿಕಾರಿಗಳಿಗೆ ಸಚಿವರ ಸೂಚನೆ

<u>ಬೆಂಗಳೂರು ಆಗಸ್ಟ್ 21(ಕರ್ನಾಟಕ ವಾರ್ತೆ)</u>

"ಬ್ಲೂವೇಲ್ ಚಾಲೆಂಜ್" ಎಂಬ ಆನ್‌ಲೈನ್ ಗೇಮ್‌ನಿಂದಾಗಿ ಶಾಲಾ ಮತ್ತು ಕಾಲೇಜು ಮಕ್ಕಳು ಪ್ರಚೋದನೆಗೊಂಡು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಘಟನೆಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಶಾಲೆ ಕಾಲೇಜುಗಳಲ್ಲಿ ಮಕ್ಕಳಿಗೆ ಅರಿವು ಮೂಡಿಸಲು ಕ್ರಮ ಕೈಗೊಳ್ಳುವಂತೆ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ ತನ್ವೀರ್ ಸೇಠ್ ಅವರು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದ್ದಾರೆ.

ಇಲಾಖೆಯು ಈ ಕೂಡಲೇ ತ್ವರಿತಗತಿಯಲ್ಲಿ ಎಲ್ಲಾ ಉಪ ನಿರ್ದೇಶಕರುಗಳು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸುತ್ತೋಲೆಯನ್ನು ಹೊರಡಿಸಿ ಶಾಲೆ ಮತ್ತು ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಮಕ್ಕಳಿಗೆ ಅರಿವು ಮತ್ತು ಜಾಗ್ರತೆ ಮೂಡಿಸಲು ಹಾಗೂ ಅಂತರ್ಜಾಲ ತಾಣಗಳಲ್ಲಿ ಈ ರೀತಿಯ ಅನಾರೋಗ್ಯಕರ ಆಟಗಳಿಂದ ದೂರವಿರುವಂತೆ ಮತ್ತು ವೆಬ್‌ಸೈಟ್‌ಗಳನ್ನು ಬಳಕೆ ಮಾಡದಂತೆ ಮುಗ್ಧ  ಶಾಲಾ ಮಕ್ಕಳಿಗೆ ತಿಳಿಸುವುದು ಉಪ ನಿರ್ದೇಶಕರುಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮುಖ್ಯೋಪಾಧ್ಯಾಯರುಗಳು, ಶಿಕ್ಷಕರುಗಳು ಮತ್ತು ಪೋಷಕರ ಜವಾಬ್ದಾರಿಯಾಗಿರುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

ಈ ಬಗ್ಗೆ ವ್ಯಾಪಕ ಪ್ರಚಾರವನನು ಹಮ್ಮಿಕೊಳ್ಳುವುದು, ಶಾಲೆಗಳಲ್ಲಿ ಮಕ್ಕಳಿಗೆ ಪ್ರತಿಧಿನ ತಿಳುವಳಿಕೆಯನ್ನು ನೀಡುವುದು ಹಾಗೂ ಸೈಬರ್ ಕೆಫೆ ಮತ್ತು ಅಂತರ್ಜಾಲ ತಾಣಗಳಿಂದ ಈ ರೀತಿಯ ಅನಾರೋಗ್ಯಕರ ಚಟುವಟಿಕೆಗಳಿಂದ ದೂರವಿರುವಂತೆ ಮಕ್ಕಳಿಗೆ ತಿಳುವಳಿಕೆ ನೀಡುವುದು ಹಾಗೂ ಈ ಬಗ್ಗೆ ಪೋಷಕರುಗಳಲ್ಲಿಯೂ ಸಹ ಜಾಗೃತಿ ಮೂಡಿಸಲು ಆಂದೋಲವನ್ನು ರೂಪಿಸುವಂತೆ ಅವರು ಸೂಚಿಸಿದ್ದಾರೆ.

ಈ ಕಾರ್ಯಕ್ರಮಕ್ಕೆ ಪೊಲೀಸ್ ಇಲಾಖೆಯ ಸಹಕಾರ ಪಡೆಯುವಂತೆ ಹಾಗೂ ಈ ರೀತಿ ಅನಾರೋಗ್ಯಕರ ಅಂತರ್ಜಾಲ ತಾಣಗಳನ್ನು ನಿರ್ಬಂಧಿಸುವಂತೆ ರಾಜ್ಯ ಮತ್ತು ಕೇಂದ್ರ ಐ.ಟಿ. ಇಲಾಖೆಗಳಿಗೆ ಪತ್ರ ಬರೆಯುವಂತೆ ಸಚಿವರು ನಿರ್ದೇಶನ ನೀಡಿದ್ದಾರೆ.

**86/86**

## ಅಂತಿಮ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು ಆಗಸ್ಟ್ 21(ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ಗೃಹ ಮಂಡಳಿಯಲ್ಲಿನ ಕಿರಿಯ ಅಭಿಯಂತರರು(ಸಿವಿಲ್) 08(ಹೈ.ಕ.) ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ಹಾಗೂ

ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದಲ್ಲಿನ ಸಹಾಯಕ ಸಾಂಖ್ಯಿಕ ಅಧಿಕಾರಿ 40 +18 (ಹೈ.ಕ.) ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಿದೆ. ತಾತ್ಕಾಲಿಕ ಆಯ್ಕೆ ಪಟ್ಟಿಗೆ ಪ್ರಕಟಿಸಲಾದ ದಿನಾಂಕದಿಂದ 7 ದಿನಗಳೊಳಗಾಗಿ ಆಕ್ಷೇಪಣೆ ಸಲ್ಲಿಸಬಹುದು ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

**87/87**

## ಡಿ.ಪಿ.ಇಡಿ ಪ್ರಥಮ/ದ್ವಿತೀಯ ಪರೀಕ್ಷೆ ಫಲಿತಾಂಶ ಪ್ರಕಟ

ಬೆಂಗಳೂರು ಆಗಸ್ಟ್ 21(ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸಲಾದ ಜೂನ್ –2017 ಡಿ.ಪಿ.ಇಡಿ. ಪ್ರಥಮ ಮತ್ತು ದ್ವಿತೀಯ ವರ್ಷದ ಪರೀಕ್ಷೆಗಳ ಫಲಿತಾಂಶವನ್ನು ದಿನಾಂಕ 24–8–2017 ರಂದು ಬೆಳಿಗ್ಗೆ 11.00 ಘಂಟೆಗೆ ಎಲ್ಲಾ ಡಿ.ಪಿ.ಇಡಿ. ಕಾಲೇಜುಗಳಲ್ಲಿ ಹಾಗೂ ಮಂಡಳಿಯ ವೆಬ್‌ಸೈಟ್ **www.kseeb.kar.nic.in** ನಲ್ಲಿ ದಿನಾಂಕ 23–8–2017 ರಂದು ಮಧ್ಯಾಹ್ನ 02–00 ಘಂಟೆಯ ನಂತರ ವೀಕ್ಷಿಸಬಹುದು. ಉತ್ತರ ಪತ್ರಿಕೆಯ ಛಾಯಾಪ್ರತಿ ಮತ್ತು ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ದಿನಾಂಕ 4–9–2017 ಕೊನೆಯ ದಿನವಾಗಿರುತ್ತದೆ ಎಂದು ಮಂಡಳಿಯ ಪ್ರಕಟಣೆ ತಿಳಿಸಿದೆ.